## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನ ರಾಷ್ಟ್ರೀಯ ಗ್ರಾಮ್ ಸ್ವರಾಜ್ ಅಭಿಯಾನ ಯೋಜನೆ ಅನುಷ್ಠಾನದ ಸಂಬಂಧ ರಾಜ್ಯದ ಪಾಲಿನ ಮೊದಲನೇ ಕಂತಿನ ಅನುದಾನವನ್ನು ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

1. ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯ ಇವರ ಅನುದಾನ ಬಿಡುಗಡೆಯ ಪತ್ರ ಸಂಖ್ಯೆ: M-11015/203/2022-CB, ದಿನಾಂಕ:20-09-2022.
2. ಕರ್ನಾಟಕ ರಾಜ್ಯ ಸರ್ಕಾರದ ಆರ್ಥಿಕ ಇಲಾಖೆಯಿಂದ ನೀಡಲಾದ ಜಮಾ ದೃಢೀಕರಣ ಪತ್ರ CCS N:FD 34 BGL 2022, ದಿನಾಂಕ:22-09-2022.
3. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 317 ಜಿಪಸ 2022, ದಿನಾಂಕ:30-09-2022

**ಪ್ರಸ್ತಾವನೆ:**

ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯನ್ನು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅನುಕ್ರಮವಾಗಿ ಶೇಕಡ 60:40ರ ಅನುಪಾತದಲ್ಲಿ ಅನುದಾನವನ್ನು ಒದಗಿಸುವ ಮೂಲಕ ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಉದ್ದೇಶಿಲಾಗಿರುತ್ತದೆ. ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ಒಟ್ಟು ರೂ.204.39 ಕೋಟಿಗಳಿಗೆ ಕರ್ನಾಟಕ ರಾಜ್ಯದ ವಾರ್ಷಿಕ ಕ್ರಿಯಾಯೋಜನೆಯನ್ನು 2022-23ನೇ ಸಾಲಿಗೆ ಅನುಮೋದಿಸಿರುತ್ತದೆ. ಮೇಲೆ ಓದಲಾದ (1)ರ ಪತ್ರದಾನುಸಾರ ಮೊದಲನೇ ಕಂತಿನ ಅನುದಾನವನ್ನು ರೂ.60.00ಕೋಟಿಗಳಿಗೆ ನಿಗದಿಪಡಿಸಿರುತ್ತದೆ. ಈ ಪೈಕಿ ರೂ.36.00 ಕೋಟಿಗಳನ್ನು ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಲಾಗಿದ್ದು, ಮೇಲೆ ಓದಲಾದ(2)ರಂತೆ ಜಮಾ ದೃಢೀಕರಣ ಪತ್ರವನ್ನು ನೀಡಲಾಗಿರುತ್ತದೆ. ಅದರಂತೆ, ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯ ಅನುಮೋದಿತ ಚಟುವಟಿಕೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ 2022-23ನೇ ಸಾಲಿನ ಲೆಕ್ಕಶೀರ್ಷಿಕೆ:2515-00-101-0-31 ರಡಿ ಕೇಂದ್ರದ ಪಾಲಿನ ಮೊದಲನೇ ಕಂತಿನ ಅನುದಾನ ಒಟ್ಟು ರೂ.36.00 ಕೋಟಿಗಳನ್ನು ಮೇಲೆ ಓದಲಾದ(3)ರ ಆದೇಶದನ್ವಯ ಬಿಡುಗಡೆಗೊಳಿಸಿ ಆದೇಶಿಸಲಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯ ಅನುಮೋದಿತ ಚಟುವಟಿಕೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ 2022-23ನೇ ಸಾಲಿನ ಆಯವ್ಯಯದಲ್ಲಿ ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯ ಲೆಕ್ಕಶೀರ್ಷಿಕೆ:2515-00-101-0-32 ರಡಿ ಒದಗಿಸಿರುವ ರಾಜ್ಯದ ಪಾಲಿನ ಅನುದಾನ

ರೂ.24.00 ಕೋಟಿಗಳಲ್ಲಿ ಮೊದಲನೇ ಕಂತಿನ ಅನುದಾನ ರೂ.24.00 ಕೋಟಿಗಳನ್ನು RGSA SNA ಖಾತೆಗೆ ಬಿಡುಗಡೆಗೊಳಿಸಲು ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 317 ಜಿಪಸ 2022, ಬೆಂಗಳೂರು, ದಿನಾಂಕ:18-10-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯ ಅನುಮೋದಿತ ಚಟುವಟಿಕೆಗಳ ಪರಿಣಾಮಕಾರಿ ಅನುಷ್ಠಾನಕ್ಕಾಗಿ 2022-23ನೇ ಸಾಲಿನ ಆಯವ್ಯಯದಲ್ಲಿ ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯ ಲೆಕ್ಕಶೀರ್ಷಿಕೆ:2515-00-101-0-32 ರಡಿ ಒದಗಿಸಿರುವ ರಾಜ್ಯದ ಪಾಲಿನ ಅನುದಾನ ರೂ.24.00 ಕೋಟಿಗಳಲ್ಲಿ ಮೊದಲನೇ ಕಂತಿನ ಅನುದಾನ ರೂ.24.00 ಕೋಟಿ (ಇಪ್ಪತ್ನಾಲ್ಕು ಕೋಟಿ ರೂಪಾಯಿಗಳು ಮಾತ್ರ)ಗಳನ್ನು RGSA SNA ಖಾತೆಗೆ ಬಿಡುಗಡೆಗೊಳಿಸಲು ಮಂಜೂರಾತಿ ನೀಡಿ ಆದೇಶಿಸಿದೆ.

---

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ,

(ಎಂ.ಎನ್.ಬಾನೊಳ್ಳಿ)

ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್)

ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

18/10/2022

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ಆಯುಕ್ತರು, ಖಜಾನೆಗಳ ಆಯುಕ್ತಾಲಯ, KPCL ಕಟ್ಟಡ, ಬೆಂಗಳೂರು.
5. ನಿರ್ದೇಶಕರು ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ವ್ಯವಸ್ಥಾಪಕರು, ರಾಜ್ಯ PFMS ವಿಭಾಗ, ಮಲ್ಲೇಶ್ವರಂ, ಬೆಂಗಳೂರು.
7. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
8. ವಿಶೇಷಾಧಿಕಾರಿ (ಜಿ.ಪಂ), ವೆಚ್ಚ-6, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
9. ವ್ಯವಸ್ಥಾಪಕರು, ನಂ.774, 100 ಫೀಟ್ ರಸ್ತೆ, HAL 2ನೇ ಹಂತ, ಇಂದಿರಾನಗರ ಶಾಖೆ, ಬೆಂಗಳೂರು-560038.
10. ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ- ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು.

11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಮುಖ್ಯ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿ, ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಕೆ.ಜಿ.ರಸ್ತೆ, ಬೆಂಗಳೂರು- ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.
13. ಹೆಚ್ಚುವರಿ ಪ್ರತಿ/ಶಾಖಾ ರಕ್ಷಾ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಹಿರಿಯ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.